# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 475

ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸ ಬೇಕಾದ ದಿನಾಂಕ : 19.07.2024

ಉತ್ತರಿಸುವವರು : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು.

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಂಗವಿಕಲರುಗಳ ಸಂಖ್ಯೆಯ ಲೆಕ್ಕವನ್ನು ಮಾಡಲಾಗಿದೆಯೇ; ಹಾಗಿದ್ದಲ್ಲಿ, ಜಿಲ್ಲಾವಾರು ಅಂಗವಿಕಲರುಗಳು ಮತ್ತು ಅವರುಗಳು ಹೊಂದಿರುವ ಶೇಕಡವಾರು ಅಂಗವಿಕಲತೆಯ ವಿವರಗಳ ಮಾಹಿತಿಯನ್ನು ನೀಡುವುದು: | ರಾಜ್ಯದಲ್ಲಿ 2011ರ ಜನಗಣತಿಯ ಪ್ರಕಾರ 13,24,205 ವಿವಿಧ ರೀತಿಯ ಅಂಗವಿಕಲರು ಇರುತ್ತಾರೆ. ಜಿಲ್ಲಾವಾರು ಪಟ್ಟಿಯನ್ನು **ಅನುಬಂಧ 1** ರಲ್ಲಿ ಒದಗಿಸಲಾಗಿದೆ. ಅವರು ಹೊಂದಿರುವ ಶೇಕಡವಾರು ಅಂಗವಿಕಲತೆಯ ವಿವರವಾದ ಮಾಹಿತಿ ಲಭ್ಯವಿರುವುದಿಲ್ಲ. ಆದರೆ ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವ ವಿಕಲಚೇತನರಿಗೆ ಮಾತ್ರ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಲಾಗುತ್ತಿದೆ. |
| ಆ) | ಈ ಅಂಗವಿಕಲರುಗಳಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ನೀಡಲಾಗುವ ಸವಲತ್ತುಗಳಾವುವು; (ಸರ್ಕಾರಿ ಆದೇಶಗಳ ಪ್ರತಿಗಳೊಂದಿಗೆ ಮಾಹಿತಿ ನೀಡುವುದು) | ಇಲಾಖೆಯಲ್ಲಿ ವಿಕಲಚೇತನರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದಿಂದ ನೀಡಲಾಗುತ್ತಿರುವ ಸವಲತ್ತುಗಳ ವಿವರಗಳನ್ನು **ಅನುಬಂಧ-2 ಮತ್ತು ಅನುಬಂಧ-3**ರಲ್ಲಿ ನೀಡಲಾಗಿದೆ. ಆದೇಶಗಳ ಪ್ರತಿಗಳನ್ನು ಅನುಬಂಧ-4(1) ರಿಂದ 4(24)ರಲ್ಲಿ ಒದಗಿಸಲಾಗಿದೆ. |
| ಇ) | ಶೇ.40% ಹೆಚ್ಚಿನ ಅಂಗವಿಕಲತೆಯನ್ನು ಹೊಂದಿರುವವರಿಗೆ ಹೆಚ್ಚಿನ ಸವಲತ್ತುಗಳನ್ನು ನೀಡಲು ಅಂಗವಿಕಲರ ಕಲ್ಯಾಣ ಇಲಾಖೆಯ ಪ್ರಯತ್ನಗಳೇನು; ಈ ಬಗ್ಗೆ ಸರ್ಕಾರಕ್ಕೆ ಯಾವುದಾದರೂ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ; (ಮಾಹಿತಿ ನೀಡುವುದು) | ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಿಂದ ಅನುಷ್ಠಾನಗೊಳಿಸುತ್ತಿರುವ ಎಲ್ಲಾ ಯೋಜನೆಗಳಡಿ ಸವಲತ್ತು ಪಡೆಯಲು ಅರ್ಜಿಗಳನ್ನು ಸೇವಾಸಿಂಧು ಮೂಲಕ ಆನ್ ಲೈನ್ ನಲ್ಲಿ ಅವಕಾಶ ಕಲ್ಪಿಸಲಾಗಿರುತ್ತದೆ. ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರವ ಗೌರವಧನ ಕಾರ್ಯಕರ್ತರಾದ ವಿವಿದ್ದೋದ್ದೇಶ ಪುನರ್ವಸತಿ ಕಾರ್ಯಕರ್ತರು, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಇವರುಗಳಿಂದ ತಾಲ್ಲೂಕು, ವಾರ್ಡ್ ಮತ್ತು ಗ್ರಾಮ ಪಂಚಾಯಿತಿ ವ್ಯಾಪ್ತಿಗಳಲ್ಲಿ ಅರಿವು ಮೂಡಿಸಿ, ಆಯಾ ಹಂತದಲ್ಲಿಯೇ ಸ್ಥಳೀಯವಾಗಿ ಗ್ರಾಮ ಒನ್, ಕರ್ನಾಟಕ ಒನ್ ಹಾಗೂ ಒನ್ ಸ್ಟಾಪ್ ಸರ್ವಿಸ್ ಸೆಂಟರ್‌ಗಳಲ್ಲಿ ಸುಲಭವಾಗಿ ಅರ್ಜಿಯನ್ನು ಸಲ್ಲಿಸುವ ಅವಕಾಶವನ್ನು ಶೇ.40ಕ್ಕಿಂತ ಹೆಚ್ಚಿನ ಅಂಗವಿಕಲತೆ ಇರುವ ವಿಕಲಚೇತನರಿಗೆ ಕಲ್ಪಿಸಲಾಗಿರುತ್ತದೆ. |
| ಈ) | ಅಂಗವಿಕಲ ಮೀಸಲಾತಿಯಲ್ಲಿ ಲಭ್ಯವಿರುವ ವಿವಿಧ ಕೋಟಾದಡಿಯಲ್ಲಿ ಶ್ರವಣ ವೈಕಲ್ಯದ ಪ್ರಕರಣಗಳಲ್ಲಿ ದುರುಪಯೋಗವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದನ್ನು ತಡೆಯಲು ಸರ್ಕಾರದ ಕ್ರಮಗಳೇನು? (ಮಾಹಿತಿ ನೀಡುವುದು) | ಅಂಗವಿಕಲ ಮೀಸಲಾತಿಯಲ್ಲಿ ಲಭ್ಯವಿರುವ ವಿವಿಧ ಕೋಟಾದಡಿಯಲ್ಲಿ ಶ್ರವಣ ವೈಕಲ್ಯದ ಪ್ರಕರಣಗಳಲ್ಲಿ ದುರುಪಯೋಗವಾಗುತ್ತಿರುವುದು ಇಲಾಖೆಯ ಗಮನಕ್ಕೆ ಬಂದಿರುವುದಿಲ್ಲ. |

**ಸಂಖ್ಯೆ:ಮಮಇ 161 ಪಿಹೆಚ್‌ಪಿ 2024**

(ಲಕ್ಷ್ಮೀ ಆರ್.ಹೆಬ್ಬಾಳ್ಕರ್)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖಾ ಸಚಿವರು.

ಅನುಬಂಧ–1

2011ರ ಜನಗಣತಿಯ ಪ್ರಕಾರ ಜಿಲ್ಲಾವಾರು ವಿಕಲಚೇತನರ ಮಾಹಿತಿ

| ಕ್ರ ಸಂ | ಜಿಲ್ಲೆಗಳ ಹೆಸರು | ದೃಷ್ಟಿದೋಷವುಳ್ಳವರು | ಶ್ರವಣದೋಷವುಳ್ಳವರು | ದೈಹಿಕ ವಿಕಲಚೇತನರ | ಬುದ್ಧಿ ಮಾಂದ್ಯರು | ಮಾನಸಿಕ ಅಸ್ವಸ್ಥರು | ಇತರೆ ವಿಕಲ ಚೇತನರು | ಬಹುವಿಧ ವಿಕಲ | ಒಟ್ಟು |
|---|---|---|---|---|---|---|---|---|---|
| 1 | 2 | 2 | 3 | 4 | 5 | 6 | 7 | 9 | 10 |
| 1 | ಬೆಂಗಳೂರು ನಗರ | 83910 | 78503 | 19732 | 15176 | 2707 | 63520 | 10682 | 274230 |
| 2 | ಬೆಂಗಳೂರು (ಗ್ರಾ) | 3857 | 4053 | 4568 | 1386 | 314 | 4217 | 1899 | 20294 |
| 3 | ಬೆಳಗಾಂ | 14349 | 19615 | 26489 | 8054 | 1553 | 14805 | 7729 | 92594 |
| 4 | ಬಳ್ಳಾರಿ | 8895 | 12515 | 11997 | 3770 | 704 | 9532 | 3482 | 50895 |
| 5 | ಬೀದರ್ | 7112 | 10629 | 10747 | 2519 | 488 | 7929 | 3213 | 42637 |
| 6 | ಬಿಜಾಪುರ | 6961 | 10674 | 10639 | 3351 | 511 | 7728 | 3669 | 43533 |
| 7 | ಬಾಗಲಕೋಟೆ | 7128 | 9767 | 12201 | 3155 | 500 | 6725 | 3703 | 43179 |
| 8 | ಚಿತ್ರದುರ್ಗ | 6196 | 8976 | 8373 | 2461 | 415 | 6589 | 2961 | 35971 |
| 9 | ಚಿಕ್ಕಮಗಳೂರು | 4360 | 4154 | 4947 | 1579 | 320 | 3750 | 2114 | 21224 |
| 10 | ಚಾಮರಾಜನಗರ | 3178 | 5674 | 4079 | 1377 | 325 | 3613 | 2218 | 20464 |
| 11 | ಧಾರವಾಡ | 6105 | 8061 | 10020 | 3074 | 777 | 5988 | 3196 | 37221 |
| 12 | ದಕ್ಷಿಣ ಕನ್ನಡ | 4094 | 5717 | 5881 | 3078 | 1927 | 3702 | 3696 | 28095 |
| 13 | ದಾವಣಗೆರೆ | 7027 | 10072 | 8760 | 3127 | 495 | 8358 | 2980 | 40819 |
| 14 | ಗುಲ್ಬರ್ಗಾ | 12752 | 19659 | 12485 | 4066 | 657 | 12948 | 3825 | 66392 |
| 15 | ಗದಗ | 3949 | 5190 | 7079 | 2014 | 350 | 4253 | 2279 | 25114 |
| 16 | ಹಾಸನ | 5289 | 7375 | 6907 | 2360 | 362 | 7240 | 2699 | 32232 |
| 17 | ಹಾವೇರಿ | 6203 | 6829 | 11332 | 3166 | 593 | 6053 | 3584 | 37760 |
| 18 | ಕೊಡಗು | 757 | 1734 | 1669 | 720 | 218 | 1478 | 793 | 7369 |
| 19 | ಕೋಲಾರ | 5278 | 8201 | 7321 | 2295 | 625 | 5732 | 2825 | 32277 |
| 20 | ಕೊಪ್ಪಳ | 5749 | 7575 | 9963 | 2351 | 495 | 5942 | 2524 | 34599 |
| 21 | ಮೈಸೂರು | 12484 | 17843 | 9812 | 3792 | 814 | 11189 | 4536 | 60470 |
| 22 | ಮಂಡ್ಯ | 7234 | 8240 | 8848 | 2625 | 481 | 5602 | 3198 | 36228 |
| 23 | ರಾಯಚೂರು | 7785 | 9555 | 8804 | 2604 | 556 | 6990 | 3072 | 39366 |
| 24 | ಶಿವಮೊಗ್ಗ | 4502 | 6087 | 6957 | 2701 | 582 | 5125 | 2881 | 28835 |
| 25 | ತುಮಕೂರು | 10198 | 14101 | 15260 | 3828 | 931 | 9335 | 5304 | 58957 |
| 26 | ಉತ್ತರ ಕನ್ನಡ | 3284 | 4406 | 6047 | 2184 | 905 | 3102 | 2665 | 22593 |
| 27 | ಉಡುಪಿ | 2317 | 3412 | 3448 | 1930 | 1136 | 2507 | 2172 | 16922 |
| 28 | ರಾಮನಗರ | 3113 | 4598 | 4850 | 1466 | 305 | 2982 | 1869 | 19183 |
| 29 | ಚಿಕ್ಕಬಳ್ಳಾಪುರ | 5445 | 6513 | 7051 | 2175 | 609 | 5388 | 2667 | 29848 |
| 30 | ಯಾದಗಿರಿ | 4659 | 6704 | 5716 | 1590 | 258 | 4399 | 1578 | 24904 |
| | ಒಟ್ಟು | 264170 | 326432 | 271982 | 93974 | 20913 | 246721 | 100013 | 1324205 |

## ಅನುಬಂಧ-2

## ಇಲಾಖೆಯು ವಿಕಲಚೇತನರಿಗಾಗಿ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳು:

**(ಎ) ಶೈಕ್ಷಣಿಕ:-**

**1) ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:**

ಶ್ರವಣದೋಷವುಳ್ಳ ಮಕ್ಕಳಿಗಾಗಿ ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಮತ್ತು ಬೆಂಗಳೂರು ನಗರ ಜಿಲ್ಲೆಗಳಲ್ಲಿ 5 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ಇಲಾಖಾವತಿಯಿಂದ ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**2) ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು**:

ಅಂಧ ಮಕ್ಕಳಿಗಾಗಿ ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ವಿಶೇಷ ಶಾಲೆಗಳನ್ನು ನಡೆಸಲಾಗುತ್ತಿದೆ.ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ.ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

**3). ರಾಜ್ಯ ಮತ್ತು ಕೇಂದ್ರ ಸರ್ಕಾರದ ಅನುದಾನಿತ ವಿಶೇಷ ಶಾಲೆಗಳು 1982ರ ರಾಜ್ಯ ಅನುದಾನ ಸಂಹಿತೆಯಡಿ ವಿಶೇಷ ಶಾಲೆಗಳು**

1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 33 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಆಯಾ ಜಿಲ್ಲೆಯ ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

**4) ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:**

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 151 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. 2022-23ನೇ ಸಾಲಿನಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿರುವ ವಿಶೇಷ ಶಾಲೆಗಳ ನಿರ್ವಹಣೆಗೆ ನೀಡಲಾಗುತ್ತಿದ್ದ ಅನುದಾನವನ್ನು ಶೇ.50%ರಷ್ಟು ಹೆಚ್ಚಿಸಿ ಸರ್ಕಾರದ ಆದೇಶ ಸಂಖ್ಯೆ: ಮಮಇ:153:ಪಿಹೆಚ್‌ಪಿ:2020, ದಿ:14.09.2022 ರಲ್ಲಿ ಆದೇಶಿಸಲಾಗಿದೆ. ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

**5. ಅಂಗವಿಕಲ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಮತ್ತು ಪ್ರೋತ್ಸಾಹನ ಧನ:**

ಈ ಯೋಜನೆಯಡಿ ಒಂದನೇ ತರಗತಿಯಿಂದ ಸ್ನಾತಕೋತ್ತರ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನವನ್ನು ಆಯಾ ಜಿಲ್ಲಾ ಕಛೇರಿಗಳ ಮೂಲಕ ಆನ್‌ಲೈನ್‌ನಲ್ಲಿ ಮಂಜೂರು ಮಾಡಲಾಗುತ್ತಿದೆ. 2001-02ನೇ ಸಾಲಿನಿಂದ ಈ ಯೋಜನೆಯ ಫಲಾನುಭವಿಗಳಿಗೆ ಆದಾಯ ಮಿತಿಯಿಂದ ವಿನಾಯಿತಿಗೊಳಿಸಲಾಗಿದೆ.

6. **ಪ್ರತಿಭಾವಂತ ಅಂಗವಿಕಲ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ಯೋಜನೆ:**

ಸಾರ್ವತ್ರಿಕ ಪರೀಕ್ಷೆಗಳಲ್ಲಿ ಶೇಕಡ 60 ಕ್ಕಿಂತಲೂ ಹೆಚ್ಚಿನ ಅಂಕಗಳನ್ನು ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ ನೀಡುವ ಯೋಜನೆ ಇದಾಗಿದೆ.

7. **ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:**

ಎಸ್.ಎಸ್.ಎಲ್.ಸಿ ನಂತರದ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ.

8. **ಮಾನಸಿಕ ಅಸ್ವಸ್ಥ, ಸೆರಬ್ರಲ್ ಪಾಲ್ಸಿ, ಆಟಿಸಂ ಮಕ್ಕಳ ಹಗಲು ಯೋಗಕ್ಷೇಮ ಕೇಂದ್ರಗಳು:**

ಸೆರಬ್ರಲ್ ಪಾಲ್ಸಿ, ಆಟಿಸಂ, ಮಾನಸಿಕ ಅಸ್ವಸ್ಥ ಹಾಗೂ ತೀವ್ರತರದ ಅಂಗವೈಕಲ್ಯತೆ ಹೊಂದಿರುವ 3 ರಿಂದ 25 ವರ್ಷದ ಒಳಗಿನ ಮಕ್ಕಳಿಗಾಗಿ 02 ಹಗಲು ಯೋಗಕ್ಷೇಮ ಕೇಂದ್ರಗಳನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಸುತ್ತಿದ್ದು, ಪ್ರತಿ ಕೇಂದ್ರದಲ್ಲಿ 25 ಮಕ್ಕಳನ್ನು ದಾಖಲಿಸಲು ಅವಕಾಶವಿದ್ದು, ಪ್ರತಿ ಮಗುವಿಗೆ ಮಾಸಿಕ ರೂ. 15,000/-ಗಳಂತೆ ವಾರ್ಷಿಕ 37.50 ಲಕ್ಷಗಳನ್ನು ಮಂಜೂರು ಮಾಡಲಾಗುತ್ತಿದೆ.

9. **ನಾಲ್ಕು ವರ್ಷದೊಳಗಿನ ಶ್ರವಣ ದೋಷವುಳ್ಳ ಮಕ್ಕಳು ಹಾಗೂ ಅವರ ತಾಯಂದಿರ ಸಹಿತ ವಾಕ್ ತರಬೇತಿ ಕೇಂದ್ರ:**

ಈ ಯೋಜನೆಯನ್ನು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ವಿಭಾಗವಾರು ತಲಾ 02 ಜಿಲ್ಲೆಗಳಲ್ಲಿ ಒಟ್ಟು 08 ಕೇಂದ್ರಗಳನ್ನು ಪ್ರಾರಂಭಿಸಲು ಅವಕಾಶವಿದ್ದು, ಪ್ರಸ್ತುತ 04 ಕೇಂದ್ರಗಳು ಕಾರ್ಯ ನಿರ್ವಹಿಸುತ್ತಿವೆ.

(ಬಿ) ಉದ್ಯೋಗ ಮತ್ತು ತರಬೇತಿ:

1. ಸರ್ಕಾರಿ ಹುದ್ದೆಗಳಲ್ಲಿ 5 ಪ್ರತಿಶತ ಮೀಸಲಾತಿ :

ಅಂಗವಿಕಲ ವ್ಯಕ್ತಿಗಳ ಹಕ್ಕುಗಳ ಅಧಿನಿಯಮ 2016ರ ಪ್ರಕಾರ ರಾಜ್ಯ ಸರ್ಕಾರದ ಸಿವಿಲ್ ಸೇವೆಯಲ್ಲಿನ ನೇರ ನೇಮಕಾತಿಯ ಎ ಮತ್ತು ಬಿ ಹುದ್ದೆಗಳಲ್ಲಿ ಶೇಕಡ 4ರಷ್ಟು ಮತ್ತು ಸಿ ಮತ್ತು ಡಿ ಹುದ್ದೆಗಳಲ್ಲಿ ಶೇಕಡ 5 ಹುದ್ದೆಗಳನ್ನು ಅಂಗವಿಕಲರಿಗಾಗಿ ಮೀಸಲಿರಿಸಲಾಗಿದೆ. ಅಂಗವಿಕಲರು ನಿರ್ವಹಿಸಬಹುದಾದ ಹುದ್ದೆಗಳನ್ನು ಆಯಾ ಇಲಾಖೆಗಳಲ್ಲಿ ಗುರುತಿಸಿ ಅಧಿಸೂಚನೆಯನ್ನು ಹೊರಡಿಸಲಾಗುತ್ತಿದೆ.

2. ವಿಕಲಚೇತನರಿಗೆ ವೃತ್ತಿ ತರಬೇತಿ ಕೇಂದ್ರಗಳು:

ಈ ಯೋಜನೆಯ ಉದ್ದೇಶವು ವಿವಿಧ ರೀತಿಯ ವಿಕಲಚೇತನರಿಗೆ ವೃತ್ತಿ ತರಬೇತಿಯನ್ನು ನೀಡುವುದಾಗಿದೆ. 1982ರ ರಾಜ್ಯ ಅನುದಾನ ಸಂಹಿತೆಯಡಿ 5 ವೃತ್ತಿ ತರಬೇತಿ ಕೇಂದ್ರಗಳನ್ನು ರಾಜ್ಯ ಸಹಾಯಾನುದಾನದಡಿ ಜಿಲ್ಲಾ ವಲಯದಲ್ಲಿ ಬೆಂಗಳೂರು ಮತ್ತು ಮೈಸೂರಿನಲ್ಲಿ ನಡೆಸಲಾಗುತ್ತಿದೆ. ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಒಂದು ವಾಕ್‌ಶ್ರವಣ ಕೇಂದ್ರವನ್ನು ಸ್ವಯಂ ಸೇವಾ ಸಂಸ್ಥೆಯ ಮೂಲಕ ನಡೆಸಲಾಗುತ್ತಿದೆ.

3. ಅಂಗವಿಕಲ ಪುರುಷ ಹಾಗೂ ಮಹಿಳೆಯರ ವಸತಿನಿಲಯ:

ಬೆಂಗಳೂರಿನಲ್ಲಿ ಮಹಿಳಾ ಮತ್ತು ಪುರುಷ ಅಂಗವಿಕಲ ನೌಕರರು ಮತ್ತು ಪ್ರಶಿಕ್ಷಣಾರ್ಥಿಗಳಿಗೆ ಪ್ರತ್ಯೇಕವಾದ ಒಂದೊಂದು ವಸತಿ ನಿಲಯವನ್ನು ನಡೆಸಲಾಗುತ್ತಿದೆ. ಪುರುಷರ ವಸತಿ ನಿಲಯದಲ್ಲಿ 50 ನಿವಾಸಿಗಳು ಹಾಗೂ ಮಹಿಳೆಯರ ವಸತಿ ನಿಲಯದಲ್ಲಿ 50 ನಿವಾಸಿಗಳನ್ನು ದಾಖಲಿಸಲು ಅವಕಾಶವಿದೆ.

4. ಆಧಾರ ಯೋಜನೆ :

ವಿಕಲಚೇತನರು ಸ್ವಯಂ ಉದ್ಯೋಗ ಕೈಗೊಂಡು ಜೀವನ ಸಾಗಿಸಲು ಅನುಕೂಲವಾಗುವಂತೆ ಆಧಾರ ಸಾಲ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಶೇ.50ರಷ್ಟು ಬ್ಯಾಂಕ್ ಸಾಲ ಮತ್ತು ಶೇ.50ರಷ್ಟು ಸಹಾಯಧನವನ್ನು ಇಲಾಖೆಯಿಂದ ನೀಡಲಾಗುತ್ತದೆ.

5. ಗ್ರಾಮೀಣ ಪುನರ್ವಸತಿ ಯೋಜನೆ:

ಈ ಯೋಜನೆಯನ್ನು ರಾಜ್ಯದ ಎಲ್ಲಾ 31 ಜಿಲ್ಲೆಗಳ 176 ತಾಲ್ಲೂಕುಗಳಲ್ಲಿ ಅನುಷ್ಠಾನ ಗೊಳಿಸಲಾಗುತ್ತಿದೆ. ಪ್ರತಿ ಗ್ರಾಮ ಪಂಚಾಯತಿಯಲ್ಲಿ ಎಸ್.ಎಸ್.ಎಲ್.ಸಿ. ಉತ್ತೀರ್ಣ/ಅನುತ್ತೀರ್ಣರಾದ ಸಮರ್ಥ ವಿಕಲಚೇತನರನ್ನು ಗ್ರಾಮೀಣ ಪುನರ್ವಸತಿ ಕಾರ್ಯಕರ್ತರೆಂದು ಹಾಗೂ ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಸ್ಥಳೀಯ ಸಮರ್ಥ ಪದವೀಧರ ವಿಕಲಚೇತನರೊಬ್ಬರನ್ನು ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರೆಂದು, ಸ್ಥಳೀಯ ನಗರ ಪ್ರದೇಶಗಳಲ್ಲಿ ನಗರ ಪುನರ್ವಸತಿ ಕಾರ್ಯಕರ್ತರೆಂದು 03 ಜಿಲ್ಲೆಗಳಿಗೆ ಒಬ್ಬರಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾ ಸಂಯೋಜಕರು ಮತ್ತು ನಿರ್ದೇಶನಾಲಯದಲ್ಲಿ ರಾಜ್ಯ ಸಂಯೋಜಕರನ್ನು ಗೌರವಧನ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅವಕಾಶವಿದೆ. ಈ ಕಾರ್ಯಕರ್ತರ ಮೂಲಕ ವಿಕಲಚೇತನರಿಗೆ ಎಲ್ಲಾ ಸೇವಾ ಸೌಲಭ್ಯಗಳನ್ನು ಅವರಿರುವ ಸ್ಥಳಗಳಲ್ಲಿಯೇ

ತಲುಪಿಸಲಾಗುವುದು. ಗೌರವಧನವನ್ನು ಕ್ರಮವಾಗಿ 6000/- ದಿಂದ 9000/-ಗಳಿಗೆ ಹಾಗೂ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರಿಗೆ 12000/- ದಿಂದ 15000/-ಗಳಿಗೆ ಹೆಚ್ಚಿಸಲಾಗಿದೆ.

ಜಿಲ್ಲಾ ಸಂಯೋಜಕರಿಗೆ ನೀಡಲಾಗುತ್ತಿದ್ದ ಗೌರವಧನ ರೂ.13,000/-ಗಳಿಂದ ರೂ.19,000/-ಗಳಿಗೆ ಹಾಗೂ ರಾಜ್ಯ ಸಂಯೋಜಕರಿಗೆ ನೀಡಲಾಗುತ್ತಿದ್ದ ಗೌರವಧನ ರೂ.26,000/-ಗಳಿಂದ ರೂ.38,000/-ಗಳಿಗೆ ಹೆಚ್ಚಿಸಲಾಗಿದೆ.

**6.ಮರಣ ಪರಿಹಾರ ನಿಧಿ ಯೋಜನೆ**: ಈ ಯೋಜನೆಯಡಿ ಕಾರ್ಯಕರ್ತರು ನಿಧನಹೊಂದಿದಲ್ಲಿ ರೂ.50,000/-ಗಳಿಂದ ರೂ.1.00 ಲಕ್ಷಗಳಿಗೆ ಹೆಚ್ಚಿಸಲಾಗಿದ್ದು, ಪರಿಹಾರ ಧನ ನೀಡಲು ಅವಕಾಶವಿರುತ್ತದೆ.

**7. ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ವಸತಿ ನಿಲಯಗಳು:**

ಅಂಗವಿಕಲ ಉದ್ಯೋಗಸ್ಥ ಮಹಿಳೆಯರಿಗಾಗಿ ಹಾಗೂ ವಿದ್ಯಾರ್ಥಿನಿ/ತರಬೇತಾರ್ಥಿಗಳಿಗೆ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಜಿಲ್ಲಾ ಕೇಂದ್ರಗಳಲ್ಲಿ 26 ಮಹಿಳಾ ವಸತಿ ನಿಲಯಗಳನ್ನು ನಡೆಸುತ್ತಿದ್ದು, ಸದರಿ ವಸತಿ ನಿಲಯಗಳಲ್ಲಿ ಉದ್ಯೋಗಸ್ಥ ವಿಕಲಚೇತನ ಮಹಿಳೆಯರಿಗೆ ಹಾಗೂ ವಿದ್ಯಾರ್ಥಿನಿಯರಿಗೆ ವಸತಿ ಸೌಲಭ್ಯವನ್ನು ಕಲ್ಪಿಸಲಾಗಿದೆ. ಈ ವಸತಿ ನಿಲಯದಲ್ಲಿ ವಿದ್ಯಾರ್ಥಿನಿಯರು ಹಾಗೂ ತರಬೇತಿದಾರರಿಗೆ ಉಚಿತ ಊಟದ ವ್ಯವಸ್ಥೆಯಿದ್ದು, ಉದ್ಯೋಗಸ್ಥ ಮಹಿಳೆಯರು ಮಾಸಿಕ 600/-ಗಳನ್ನು ಪಾವತಿಸಬೇಕಾಗಿರುತ್ತದೆ.

**(ಸಿ) ಸಾಮಾಜಿಕ ಭದ್ರತಾ ಯೋಜನೆಗಳು:**

**1. ಸಮಾಜ ಸೇವಾ ಸಂಕೀರ್ಣ:**

ನಿರ್ಗತಿಕ ಬುದ್ಧಿಮಾಂದ್ಯ ಪುರುಷರಿಗಾಗಿ ಸಮಾಜ ಸೇವಾ ಸಂಕೀರ್ಣ ಸಂಸ್ಥೆಯು ಬೆಂಗಳೂರಿನಲ್ಲಿ ಸರ್ಕಾರದ ವತಿಯಿಂದ ನಡೆಯುತ್ತಿದ್ದು, ಈ ಸಂಸ್ಥೆಯಲ್ಲಿ ನಿವಾಸಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ, ಸಂರಕ್ಷಣೆ ಒದಗಿಸಲಾಗುತ್ತಿದೆ.

**2. ಮಂದಮತಿ ಮಹಿಳೆಯರ ಅನುಪಾಲನಾ ಗೃಹ:**

18 ವರ್ಷ ಮೇಲ್ಪಟ್ಟ ನಿರ್ಗತಿಕ ಮಹಿಳಾ ಬುದ್ಧಿಮಾಂದ್ಯರಿಗೆ ಉಚಿತ ಊಟ, ವಸತಿ, ವೈದ್ಯಕೀಯ ಸೌಲಭ್ಯ ಮತ್ತು ಸಂರಕ್ಷಣೆ ಒದಗಿಸುವ ಉದ್ದೇಶದಿಂದ ಮಂದಮತಿ ಮಹಿಳೆಯರ ಅನುಪಾಲನಾ ಗೃಹಗಳನ್ನು ಬೆಂಗಳೂರು ನಗರ ಹಾಗೂ ಹುಬ್ಬಳ್ಳಿಯಲ್ಲಿ ಇಲಾಖಾವತಿಯಿಂದ ನಡೆಸಲಾಗುತ್ತಿದೆ.

**3. ಮಾನಸಿಕ ಅಸ್ವಸ್ಥರಿಗೆ ಮಾನಸ ಕೇಂದ್ರಗಳು:**

ಮಾನಸಿಕ ಅಸ್ವಸ್ಥರಿಗಾಗಿ ಬೆಂಗಳೂರು, ಬೆಳಗಾವಿ, ಕಲಬುರಗಿ, ಬಳ್ಳಾರಿ ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿ ಮಾನಸ ಕೇಂದ್ರಗಳನ್ನು ಪ್ರಾರಂಭಿಸಲು ಸರ್ಕಾರ ಮಂಜೂರಾತಿಯನ್ನು ನೀಡಿರುತ್ತದೆ. ರಾಜ್ಯ ಉಚ್ಚ ನ್ಯಾಯಾಲಯ ಮತ್ತು ಅಧೀನ ನ್ಯಾಯಾಲಯಗಳಿಂದ ಆದೇಶಿಸಲ್ಪಡುವ ಮಾನಸಿಕ ಅಸ್ವಸ್ಥರನ್ನು ಹಾಗೂ ರಸ್ತೆಗಳಲ್ಲಿ ಒಡಾಡುವ ನಿರ್ಗತಿಕ ಮಾನಸಿಕ ಅಸ್ವಸ್ಥರನ್ನು ಈ ಕೇಂದ್ರಗಳಲ್ಲಿ ನಿರ್ದಿಷ್ಟ ವೈದ್ಯಕೀಯ ಪ್ರಾಧಿಕಾರದ ಆದೇಶದ ಮೇರೆಗೆ ದಾಖಲಿಸಲು ಅವಕಾಶವಿರುತ್ತದೆ. ಈ ಕೇಂದ್ರಗಳಲ್ಲಿ ಫಲಾನುಭವಿಗಳಿಗೆ ಉಚಿತ ಊಟ, ವಸತಿ, ವೈದ್ಯಕೀಯ ಶುಶ್ರೂಷೆ, ವೈದ್ಯಕೀಯ ಸಲಹೆ (ಕೌನ್ಸಲಿಂಗ್) ಸೌಲಭ್ಯವನ್ನು ನೀಡಲಾಗುತ್ತಿದ್ದು,

ಇವು ಅಲ್ಪಾವಧಿ ಕೇಂದ್ರಗಳಾಗಿರುತ್ತವೆ. ಪ್ರಸ್ತುತ ಬೆಂಗಳೂರು ನಗರ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಮಾತ್ರ ಮಾನಸ ಕೇಂದ್ರಗಳು ನಡೆಯುತ್ತಿವೆ.

**4. ಬುದ್ಧಿಮಾಂದ್ಯ ಮಕ್ಕಳ ಪೋಷಕರಿಗೆ ವಿಮಾ ಯೋಜನೆ:**

ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ: ತಾಯಿ: ಪೋಷಕರ ವಿಮಾ ಯೋಜನೆಯನ್ನು ಭಾರತೀಯ ಜೀವ ವಿಮಾ ನಿಗಮದ ಮೂಲಕ ಅನುಷ್ಠಾನಗೊಳಿಸಲಾಗುತ್ತಿದ್ದು, ಬುದ್ಧಿಮಾಂದ್ಯ ಮಕ್ಕಳ/ವ್ಯಕ್ತಿಗಳ ತಂದೆ:ತಾಯಿ: ಪೋಷಕರು ಮರಣ ಹೊಂದಿದ ನಂತರ ಬುದ್ಧಿಮಾಂದ್ಯ ಮಕ್ಕಳ ಜೀವನ ನಿರ್ವಹಣೆಗಾಗಿ ರೂ.20,000/-ಗಳ ಪರಿಹಾರ ಧನವನ್ನು ಬುದ್ಧಿಮಾಂದ್ಯ ವ್ಯಕ್ತಿಗಳ ನಾಮ ನಿರ್ದೇಶಿತರಿಗೆ ಪಾವತಿಸಲಾಗುತ್ತಿದೆ.

**5. ವಿಕಲಚೇತನ ವ್ಯಕ್ತಿಗಳನ್ನು ಸಾಮಾನ್ಯರು ಮದುವೆಯಾದಲ್ಲಿ ಪ್ರೋತ್ಸಾಹ ಧನ ನೀಡುವ ಯೋಜನೆ:**

ವಿಕಲಚೇತನ ಯುವಕ/ಯುವತಿಯರನ್ನು ವಿವಾಹವಾಗುವ ಸಾಮಾನ್ಯ ಯುವಕ/ಯುವತಿಯರಿಗೆ ನಿರಂತರವಾಗಿ ಮಾಸಿಕ ಆದಾಯ ದೊರಕಿಸಲು ವಿಕಲಚೇತನ ವ್ಯಕ್ತಿಯ ಹೆಸರಿನಲ್ಲಿ ರೂ.50,000/-ಗಳನ್ನು 05 ವರ್ಷದ ಅವಧಿಗೆ ಹೂಡಿಕೆಯ ರೂಪದಲ್ಲಿ ನೀಡಲಾಗುವುದು. ಅದರಿಂದ ಬರುವ ಬಡ್ಡಿ ಹಣವನ್ನು ಫಲಾನುಭವಿಗಳು ಉಪಯೋಗಿಸಬಹುದು ಹಾಗೂ 05 ವರ್ಷಗಳ ನಂತರ ಠೇವಣಿ ಮೊತ್ತವನ್ನು ವಾಪಸ್ಸು ಪಡೆಯಬಹುದು ಅಥವಾ ಮುಂದುವರೆಸಲು ಸಹ ಅವಕಾಶವಿರುತ್ತದೆ.

**<u>6. ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಭತ್ಯೆ ಒದಗಿಸುವ ಯೋಜನೆ :</u>**

ಅಂಧ ಮಹಿಳೆಯರು ಮಗುವಿಗೆ ಜನ್ಮ ನೀಡಿದಾಗ ಆ ಮಗುವನ್ನು ಇತರೆ ಸಾಮಾನ್ಯ ತಾಯಂದಿರಂತೆ ಆರೈಕೆ ಮಾಡುವುದು ಕಷ್ಟಕರವಾಗಿರುತ್ತದೆ. ಇಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧೋಪಚಾರಗಳಿಗೆ ಮಾಹೆಯಾನ ರೂ.2000/- ದಂತೆ 5 ವರ್ಷಗಳ ಅವಧಿಗೆ ಸಹಾಯಧನವನ್ನು ನೀಡಲಾಗುತ್ತಿದೆ. ಈ ಸೌಲಭ್ಯವನ್ನು ಗರಿಷ್ಠ 2 ಮಕ್ಕಳವರೆಗೆ ಪಡೆಯಬಹುದಾಗಿದೆ.

## <u>(ಡಿ) ಪುನರ್ವಸತಿ ಯೋಜನೆಗಳು:</u>

### <u>1. ಸಾಧನ ಸಲಕರಣೆಗಳು :</u>

ಈ ಯೋಜನೆಯಡಿಯಲ್ಲಿ ವಿಕಲಚೇತನರಿಗೆ ಅವಶ್ಯವಾಗಿರುವ ಸಾಧನ ಸಲಕರಣೆಗಳನ್ನು (ಕ್ಯಾಲಿಪರ್ಸ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್, ಕ್ರಚಸ್, ಊರುಗೋಲು, ಶ್ರವಣಸಾಧನ ಇನ್ನು ಮುಂತಾದವುಗಳು) ರೂ.15,000/-ಗಳ ಮಿತಿಯೊಳಗೆ ಉಚಿತವಾಗಿ ನೀಡಲಾಗುತ್ತದೆ. ಫಲಾನುಭವಿಯ ಕುಟುಂಬದ ವಾರ್ಷಿಕ ಆದಾಯ ಮಿತಿಯನ್ನು ಗ್ರಾಮೀಣ ಪ್ರದೇಶದ ರೂ.11,500/- ಮತ್ತು ನಗರ ಪ್ರದೇಶದಲ್ಲಿ ರೂ.24,000/- ನಿಗದಿಗೊಳಿಸಲಾಗಿದೆ. ಫಲಾನುಭವಿಗಳು ಅರ್ಜಿಯನ್ನು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಗೆ ಆನ್‌ಲೈನ್ ಮೂಲಕ ಅರ್ಜಿಯನ್ನು ಸಲ್ಲಿಸಿ, ಸೌಲಭ್ಯ ಪಡೆಯಬಹುದು.

### ಅ) ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ :

ಎಸ್.ಎಸ್.ಎಲ್.ಸಿ ನಂತರ ವ್ಯಾಸಂಗ ಮಾಡುವ ದೃಷ್ಠಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಂತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ಅರ್ಹ ಫಲಾನುಭವಿಗಳಿಗೆ ನೀಡಲಾಗುತ್ತಿದೆ.

### ಆ) ತೀವ್ರತೆರನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ

20 ರಿಂದ 60 ವರ್ಷದ ವಯೋಮಾನದ ತೀವ್ರತರವಾದ ದೈಹಿಕ ವಿಕಲಚೇತನರ ಕುಟುಂಬದ ವಾರ್ಷಿಕ ವರಮಾನ ರೂ.2.00 ಲಕ್ಷಗಳಿಗಿಂತ ಕಡಿಮೆ ಇರುವ ವಿಕಲಚೇತನರಿಗೆ ಅನುಕೂಲವಾಗುವಂತೆ ಜೀವಿತ ಕಾಲದಲ್ಲಿ ಒಂದು ಬಾರಿ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಒದಗಿಸಲಾಗುತ್ತಿದೆ.

### ಇ) ಶ್ರವಣದೋಷವುಳ್ಳ ವ್ಯಕ್ತಿಗಳ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರಗಳು:

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಶ್ರವಣದೋಷವುಳ್ಳ ವ್ಯಕ್ತಿಗಳ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರಗಳನ್ನು ಖರೀದಿಸಿ ವಿತರಿಸಲಾಗುತ್ತಿದೆ. ಹೊಲಿಗೆ ಯಂತ್ರವನ್ನು ವಿತರಿಸಲು ನಿರ್ದೇಶನಾಲಯದಲ್ಲಿ ಟೆಂಡರ್ ಕರೆಯಲಾಗಿ ಸಂಸ್ಥೆಯನ್ನು ಆಯ್ಕೆ ಮಾಡಲಾಗುವುದು ನಂತರ ಜಿಲ್ಲಾ ಮಟ್ಟದಲ್ಲಿ ಆಯ್ಕೆ ಸಮಿತಿಯನ್ನು ರಚಿಸಿದ್ದು, ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಸಭೆಯಲ್ಲಿ ಆಯ್ಕೆಯಾದ ಫಲಾನುಭವಿಗಳಿಗೆ ಹೊಲಿಗೆ ಯಂತ್ರವನ್ನು ವಿತರಿಸಲಾಗುವುದು.

### ಈ. ದೃಷ್ಟಿದೋಷವುಳ್ಳ ವ್ಯಕ್ತಿಗಳಿಗೆ ಬ್ರೈಲ್ ಕಿಟ್:

ಅಂಧ ವಿದ್ಯಾರ್ಥಿಗಳು ತಮ್ಮ ದೈನಂದಿನ ಚಟುವಟಿಕೆಗಳಲ್ಲಿ ಸ್ವಾವಲಂಬಿಗಳಾಗಲು ರಾಜ್ಯದ ೫೦೦ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಮೊಬೈಲ್, ಬ್ರೈಲ್ ವಾಚ್, ವಾಕಿಂಗ್ ಸ್ಟಿಕ್ ಮತ್ತು ಇನ್ನಿತರೆ ಸಾಧನಗಳನ್ನು ಒಳಗೊಂಡ ಖರೀದಿಸಿ ವಿತರಿಸಲಾಗುತ್ತಿದೆ.

### ಉ) ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿತರಿಸುವ ಯೋಜನೆ:

2023-24ನೇ ಸಾಲಿನಿಂದ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿಕಲಚೇತನರಿಗೆ ಅನುಕೂಲವಾಗುವಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ವಿತರಿಸಲಾಗುತ್ತಿದೆ.

### 2. ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ಯೋಜನೆ:-

ವಿಕಲಚೇತನರನ್ನು ಗುರುತಿಸಿ ಅವರಿಗೆ ಶೈಕ್ಷಣಿಕ, ಉದ್ಯೋಗ ಮತ್ತು ತರಬೇತಿ, ಸಾಮಾಜಿಕ ಭದ್ರತೆ ಹಾಗೂ ಪುನರ್ವಸತಿ ಸೇವೆಗಳನ್ನು ಅವರ ಮನೆ ಬಾಗಿಲಿನಲ್ಲಿಯೇ ಒದಗಿಸಿ ಅವರಿಗೆ ಸರ್ವಾಂಗೀಣ ಪುನರ್ವಸತಿಯನ್ನು ಕಲ್ಪಿಸುವುದು ಈ ಯೋಜನೆಯ ಪ್ರಮುಖ ಉದ್ದೇಶವಾಗಿದೆ. ಈ ಯೋಜನೆಯಡಿ ವಿಕಲಚೇತನರಿಗೆ ಅಗತ್ಯವಿರುವ ವೈದ್ಯಕೀಯ ಸೇವೆ, ವೃತ್ತಿ ಚಿಕಿತ್ಸೆ, ವಿವಿಧ ರೀತಿಯ ಸಾಧನ ಸಲಕರಣೆಗಳನ್ನು ಕೇಂದ್ರಗಳಲ್ಲಿ ತಯಾರಿಸಿ ಒದಗಿಸಲಾಗುವುದು.

### 3. ಅಂಗವಿಕಲತೆಯನ್ನು ನಿವಾರಿಸುವ ಶಸ್ತ್ರಚಿಕಿತ್ಸೆಗಾಗಿ ವೈದ್ಯಕೀಯ ಪರಿಹಾರ ನಿಧಿ ಯೋಜನೆ:-

ಅಂಗವಿಕಲ ವ್ಯಕ್ತಿಗಳಿಗೆ ಅಂಗವಿಕಲತೆಯನ್ನು ನಿವಾರಿಸಲು ಶಸ್ತ್ರ ಚಿಕಿತ್ಸೆಗಾಗಿ ಸರ್ಕಾರಿ ಆಸ್ಪತ್ರೆ, ಸಂಜಯಗಾಧಿ ಆಸ್ಪತ್ರೆಗಳಲ್ಲಿ ಹಾಗೂ ಸುಸಜ್ಜಿತ ಖಾಸಗಿ ಆಸ್ಪತ್ರೆಗಳಲ್ಲಿ ಅಂಗವಿಕಲತೆ ನಿವಾರಣಾ ಶಸ್ತ್ರ ಚಿಕಿತ್ಸೆಗಾಗಿ ರೂ.1.00 ಲಕ್ಷಗಳವರೆಗೆ ಸಹಾಯ ಧನವನ್ನು ಮಂಜೂರು ಮಾಡಲಾಗುತ್ತಿದೆ.

### 4. ಸಾಧನೆ ಮತ್ತು ಪ್ರತಿಭೆ ಯೋಜನೆ:

ವಿಕಲಚೇತನರು ನೀಡುವ ಸಾಂಸ್ಕೃತಿಕ ಚಟುವಟಿಕೆಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡುವ ಸಲುವಾಗಿ "ಪ್ರತಿಭೆ" ಎಂಬ ಯೋಜನೆಯನ್ನು ಹಾಗೂ ಅಂಗವಿಕಲ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡಿ ಧನಸಹಾಯ ನೀಡಲು "ಸಾಧನೆ" ಎಂಬ ಯೋಜನೆಯು ಜಾರಿಯಲ್ಲಿದ್ದು, ಕ್ರೀಡೆಗಳಲ್ಲಿ ವಿಶೇಷ ಸಾಧನೆಗೈದ ವಿಕಲಚೇತನರಿಗೆ ರೂ.50,000/-ಗಳ ಧನ ಸಹಾಯವನ್ನು ನೀಡಲಾಗುತ್ತಿದೆ.

### 5. ನಿರಾಮಯ ಆರೋಗ್ಯ ವಿಮಾ ಯೋಜನೆ : (ಆಟಿಸಂ, ಸೆರೆಬ್ರಲ್ ಪಾಲ್ಸಿ, ಬೌದ್ಧಿಕ ಅಂಗವಿಕಲತೆ ಮತ್ತು ಬಹುವಿಧ ಅಂಗವಿಕಲತೆ)

ಬುದ್ಧಿಮಾಂದ್ಯ, ಸೆರಬ್ರಲ್ ಪಾಲ್ಸಿ, ಆಟಿಸಂ ಮತ್ತು ಬಹುವಿಧ ಅಂಗವಿಕಲತೆಗೆ ಒಳಗಾದ ಬಡತನ ರೇಖೆಗಿಂತ ಕೆಳಗಿರುವ ಕುಟುಂಬದ ವಿಕಲಚೇತನರಿಗೆ ನಿರಾಮಯ ಎಂಬ ಆರೋಗ್ಯ ವಿಮಾ ಯೋಜನೆಯು ಜಾರಿಯಲ್ಲಿದ್ದು, ಮೇಲೆ ವಿವರಿಸಿದ ಅಂಗವಿಕಲತೆ ಹೊಂದಿರುವ ಪ್ರತಿ ವ್ಯಕ್ತಿಗೆ ವರ್ಷಕ್ಕೆ ಒಂದು ಬಾರಿಗೆ ಪ್ರೀಮಿಯಂ ಮೊತ್ತ ರೂ.250/-ಗಳನ್ನು ನ್ಯಾಷನಲ್ ಟ್ರಸ್ಟ್ ಸಂಸ್ಥೆಗೆ ಪಾವತಿಸಲಾಗುವುದು. ಪ್ರತಿ ವರ್ಷ ಯೋಜನೆಯಡಿ ಬರುವ ಫಲಾನುಭವಿಗಳು ರೂ.1.00 ಲಕ್ಷಗಳವರೆಗೆ ವೈದ್ಯಕೀಯ ಸೌಲಭ್ಯ ಪಡೆಯಬಹುದಾಗಿರುತ್ತದೆ.

### 6. ಸ್ಪರ್ಧಾ ಚೇತನ:-

ಈ ಯೋಜನೆಯಡಿ ಐ.ಎ.ಎಸ್./ಕೆ.ಎ.ಎಸ್. ಹಾಗೂ ಇತರೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸರ್ಕಾರದ ಇತರೆ ಇಲಾಖೆಗಳಡಿ ಗುರುತಿಸಲ್ಪಟ್ಟ ಪರೀಕ್ಷಾ ಪೂರ್ವ ತರಬೇತಿ ಕೇಂದ್ರಗಳು ಹಾಗೂ ಈ ಇಲಾಖೆಯಿಂದ ಗುರುತಿಸಲ್ಪಟ್ಟ ತರಬೇತಿ ಕೇಂದ್ರಗಳಲ್ಲಿ ತರಬೇತಿ ಪಡೆಯುವ ವಿಕಲಚೇತನರಿಗೆ ಮಾರ್ಗಸೂಚಿಯಲ್ಲಿ ನಿಗದಿಪಡಿಸಿದ ಮೊತ್ತವನ್ನು ಪಾವತಿಸಲಾಗುವುದು.

### 7. ನಿರುದ್ಯೋಗ ಭತ್ಯೆ :-

ಎಸ್.ಎಸ್.ಎಲ್.ಸಿ ಹಾಗೂ ನಂತರದ ತರಗತಿಗಳಲ್ಲಿ ವ್ಯಾಸಂಗ ಮಾಡಿರುವ ನಿರುದ್ಯೋಗಿ ವಿಕಲಚೇತನರಿಗೆ ಮಾಸಿಕ ರೂ.1000/-ಗಳ ನಿರುದ್ಯೋಗ ಭತ್ಯೆಯನ್ನು ಮಂಜೂರು ಮಾಡಲಾಗುತ್ತಿದೆ.

## (ಇ) ಸಾರ್ವಜನಿಕ ಅರಿವು ಮೂಡಿಸುವ ಯೋಜನೆಗಳು:

### 1. ವಿಕಲಚೇತನರ ಮಾಹಿತಿ ಸಲಹಾ ಕೇಂದ್ರ :

ಅಂಗವಿಕಲರಿಗೆ ಲಭ್ಯವಿರುವ ರಾಜ್ಯ ಸರ್ಕಾರದ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳ ಹಾಗೂ ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿಯನ್ನು ಒದಗಿಸಲು

ನಿರ್ದೇಶನಾಲಯದಲ್ಲಿ ಹಾಗೂ ರಾಜ್ಯದ 31 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ / ಮಾಹಿತಿ ಕೇಂದ್ರಗಳನ್ನು ನಡೆಸಲಾಗುತ್ತಿದೆ.

2) **ವಿಕಲಚೇತನರಿಗೆ ರಿಯಾಯಿತಿ ದರದ ಬಸ್ ಪಾಸ್:** ಈ ಯೋಜನೆಯಡಿ ಸರ್ಕಾರವು ಅರ್ಹ ವಿಕಲಚೇತನರಿಗೆ 100 ಕಿ.ಮೀ. ವ್ಯಾಪ್ತಿಯೊಳಗೆ ಸಂಚರಿಸಲು ವಾರ್ಷಿಕ ರೂ.660/-ಗಳ ರಿಯಾಯಿತಿ ದರದಲ್ಲಿ ಕೆ.ಎಸ್.ಆರ್.ಟಿ.ಸಿ/ಬಿ.ಎಂ.ಟಿ.ಸಿ ವತಿಯಿಂದ ಬಸ್ ಪಾಸ್‌ಗಳನ್ನು ವಿತರಿಸಲಾಗುತ್ತಿದೆ.

ನಿರ್ದೇಶಕರು,
ವಿಕಲಚೇತನರ ಹಾಗೂ ಹಿರಿಯ
ನಾಗರಿಕರಣ ಸಬಲೀಕರಣ ಇಲಾಖೆ,
ಬೆಂಗಳೂರು

# ಅನುಬಂಧ-3

<u>ವಿಕಲಚೇತನರಿಗಾಗಿ ಅನುಷ್ಠಾನಗೊಳಿಸುತ್ತಿರುವ ಕೇಂದ್ರ ಸರ್ಕಾರದ ಯೋಜನೆಗಳು</u>

1. **ದೀನ್ ದಯಾಳ್ ದಿವ್ಯಾಂಗಜನ್ ರಿಹ್ಯಾಬಿಲಿಟೇಷನ್ ಯೋಜನೆ (DDRS) ವಿಕಲಚೇತನರಿಗೆ ಶೈಕ್ಷಣಿಕ ಹಾಗೂ ವೃತ್ತಿ ತರಬೇತಿ ಯೋಜನೆಗಳು:**
   ವಿವಿಧ ವಿಕಲಚೇತನ ಮಕ್ಕಳಿಗೆ ಉಚಿತ ವಿದ್ಯಾಭ್ಯಾಸ, ತರಬೇತಿ, ಊಟ, ವಸತಿ ಮತ್ತು ಶೈಕ್ಷಣಿಕ ಸೌಲಭ್ಯಗಳನ್ನು ಕಲ್ಪಿಸಿ ಸಮಾಜದಲ್ಲಿ ಇತರೆ ಮಕ್ಕಳಿಗೆ ವಿದ್ಯಾಭ್ಯಾಸವನ್ನು ಒದಗಿಸಲು ಉದ್ದೇಶಿಸಿರುವ ಸ್ವಯಂ ಸೇವಾ ಸಂಸ್ಥೆಗಳಿಗೆ ಕೇಂದ್ರ ಸರ್ಕಾರದ ಮೂಲಕ ಧನ ಸಹಾಯ ನೀಡುವ ಯೋಜನೆ. ಸ್ವಯಂ ಸೇವಾ ಸಂಸ್ಥೆಗಳ ಮೂಲಕ 02 ವಿಶೇಷ ಶಾಲೆಗಳು ಮತ್ತು 1 ಪುನರ್ವಸತಿ ಕೇಂದ್ರ ನಡೆಯುತ್ತಿದ್ದು, ಸದರಿ ವಿಶೇಷ ಶಾಲೆ ಹಾಗೂ ಪುನರ್ವಸತಿ ಕೇಂದ್ರಗಳಿಗೆ ಕೇಂದ್ರ ಸರ್ಕಾರದಿಂದ ಶೇ.90ರಷ್ಟು ಅನುದಾನವನ್ನು ಮಂಜೂರು ಮಾಡಲಾಗುತ್ತಿದ್ದು, ಉಳಿದ ಶೇ.10ರಷ್ಟು ವೆಚ್ಚವನ್ನು ಸಂಸ್ಥೆಯವರು ಭರಿಸಬೇಕಾಗಿರುತ್ತದೆ.
2. **ಸಿಪ್ಡ ಯೋಜನೆ (Scheme for Implementation of the Rights of Persons with Disabilities Act 2016 - SIPDA):**
   ಈ ಯೋಜನೆಯಡಿ ವಿಕಲಚೇತನರು ಸುಗಮವಾಗಿ ಓಡಾಡಲು ತಡೆರಹಿತ ವಾತಾವರಣ ನಿರ್ಮಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಸದರಿ ಯೋಜನೆಯಡಿ ರಾಜ್ಯದ 3 ಧಾರ್ಮಿಕ ಸ್ಥಳಗಳಲ್ಲಿ (ಚಾಮುಂಡೇಶ್ವರಿ ದೇವಸ್ಥಾನ ಮೈಸೂರು, ಬಾಹುಬಲಿ ಗೊಮ್ಮಟೇಶ್ವರ ಜೈನಮಂದಿರ, ಶ್ರವಣಬೆಳಗೊಳ ಮತ್ತು ಗೋಕರ್ಣದ ಮಹಾಬಲೇಶ್ವರ ದೇವಸ್ಥಾನ, ಉತ್ತರ ಕನ್ನಡ ಜಿಲ್ಲೆ) ತಡೆರಹಿತ ವಾತಾವರಣ ನಿರ್ಮಿಸಲು ಪ್ರಸ್ತಾವನೆಯನ್ನು ಸಲ್ಲಿಸಲು ಕ್ರಮಕೈಗೊಳ್ಳಲಾಗುತ್ತಿದೆ.
3. **ಅಡಿಪ್ ಯೋಜನೆ- ADIP (Assistive Devices for Persons with Disabilities):**
   ರಾಜ್ಯದಲ್ಲಿ ಈ ಯೋಜನೆಯನ್ನು ೧೯೯೫ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ,ಈ ಯೋಜನೆಯಡಿ ಅಂಗವಿಕಲರಿಗೆ ಸಾಧನ ಸಲಕರಣೆಗಳನ್ನು ಉಚಿತವಾಗಿ / ರಿಯಾಯಿತಿ ದರದಲ್ಲಿ ವಿತರಿಸಲಾಗುತ್ತದೆ ಜಿಲ್ಲಾ ಪುನರ್ವಸತಿ ಕೇಂದ್ರಗಳ ಹಾಗೂ ಕೇಂದ್ರ ಸರ್ಕಾರ ಸಾಮ್ಯದ Artificial Limbs manufacturing corporation of India (ALIMCO) ಸಂಸ್ಥೆಯ ಮುಖಾಂತರ ಅಂಗವಿಕಲರಿಗೆ ಸಾಧನ ಸಲಕರಣೆಗಳನ್ನು ವಿತರಿಸಲಾಗುತ್ತಿದೆ.
4. **ರಾಷ್ಟ್ರೀಯ ವಿದ್ಯಾರ್ಥಿ ವೇತನ ಯೋಜನೆ (National E-Scholarship):**
   ಕೇಂದ್ರ ಸರ್ಕಾರವು ನ್ಯಾಷನಲ್ ಇ ಸ್ಕಾಲರ್‌ಶಿಪ್ ಯೋಜನೆಯಡಿ ವಿಕಲಚೇತನ ವಿದ್ಯಾರ್ಥಿಗಳ ವ್ಯಾಸಂಗವನ್ನು ಉತ್ತೇಜಿಸುವ ನಿಟ್ಟಿನಲ್ಲಿ 09 ಮತ್ತು 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರಿ-ಮೆಟ್ರಿಕ್ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಪಿ.ಯು.ಸಿಯಿಂದ ಪದವಿಯವರೆಗೆ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೋಸ್ಟ್‌ಮೆಟ್ರಿಕ್ ವಿದ್ಯಾರ್ಥಿವೇತನ ಗರಿಷ್ಟ ರೂ.15000/-ಗಳನ್ನು ನೀಡಲಾಗುತ್ತದೆ. ಸ್ನಾತಕೋತ್ತರ ಪದವಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಟಾಪ್‌ಮೆಟ್ರಿಕ್ ವೇತನ ಗರಿಷ್ಠ ರೂ.2.00 ಲಕ್ಷಗಳನ್ನು ಈ ಯೋಜನೆಯಡಿ ನೀಡಲಾಗುತ್ತಿದೆ.

5. **ಸುಗಮ್ಯ ಭಾರತ ಅಭಿಯಾನ (Accessible India Campaign – AIC):**

ಈ ಯೋಜನೆಯನ್ನು ರಾಜ್ಯದಲ್ಲಿ 2018-19ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಯೋಜನೆಯಡಿ ಕೇಂದ್ರ ಸರ್ಕಾರವು ಗುರುತಿಸಲ್ಪಟ್ಟ 50 ಸರ್ಕಾರಿ ಸಾರ್ವಜನಿಕ ಕಟ್ಟಡಗಳ ಪೈಕಿ 47 ಸರ್ಕಾರಿ ಸಾರ್ವಜನಿಕ ಕಟ್ಟಡಗಳಲ್ಲಿ ತಡೆರಹಿತ ವಾತಾವರಣ ನಿರ್ಮಿಸಲು ಕೇಂದ್ರ ಸರ್ಕಾರದಿಂದ 2018-19ನೇ ಸಾಲಿನಲ್ಲಿ 20 ಕಟ್ಟಡಗಳಿಗೆ ಹಾಗೂ 2019-20ನೇ ಸಾಲಿನಲ್ಲಿ 27 ಕಟ್ಟಡಗಳಿಗೆ ಆಯವ್ಯಯವನ್ನು ಬಿಡುಗಡೆ ಮಾಡಿದ್ದು, ಅದರಲ್ಲಿ 18 ಕಟ್ಟಡಗಳ ಕಾಮಗಾರಿ ಪೂರ್ಣಗೊಂಡಿರುತ್ತದೆ. ಉಳಿದ 02 ಕಟ್ಟಡಗಳ ಕಾಮಗಾರಿಗಳಲ್ಲಿ ಲೇಡಿ ಕರ್ಜನ್ & ಬೌರಿಂಗ್ ಆಸ್ಪತ್ರೆಯ ಕಟ್ಟಡಕ್ಕಾಗಿ ಬಿಡುಗಡೆ ಮಾಡಿದ ಆಯವ್ಯಯವನ್ನು ಹಿಂದಿರುಗಿಸಿರುತ್ತಾರೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯವರು ಆಯವ್ಯಯದ ಅವಶ್ಯಕತೆಯಿಲ್ಲವೆಂದು ತಿಳಿಸಿರುತ್ತಾರೆ.

6. **ಮಾದಕ ವಸ್ತು ವ್ಯಸನಿಗಳ ಪುನರ್ವಸತಿ ಕೇಂದ್ರಗಳು (Integrated Rehabilitation Center for Drug Addicts):**

ಈ ಯೋಜನೆಯಡಿ ಮಾದಕ ವಸ್ತು ವ್ಯಸನಿಗಳನ್ನು ಪುನರ್ವಸತಿಗಾಗಿ ಈ ಕೇಂದ್ರಗಳಿಗೆ ದಾಖಲು ಮಾಡಲಾಗುವುದು. ಸದರಿ ಯೋಜನೆಯಡಿ 26 ಜಿಲ್ಲೆಗಳಲ್ಲಿ 32 "ಮಾದಕ ವಸ್ತು ವ್ಯಸನಿಗಳ ಪುನರ್ವಸತಿ ಕೇಂದ್ರಗಳನ್ನು" ಸ್ವಯಂ ಸೇವಾ ಸಂಸ್ಥೆಗಳ ಮೂಲಕA ನಡೆಸಲಾಗುತ್ತಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಛೇರಿಯನ್ನು ಸಂಪರ್ಕಿಸಬಹುದು. ಈ ಯೋಜನೆಯಡಿ ಸ್ವಯಂ ಸೇವಾ ಸಂಸ್ಥೆಗಳು ಅನುದಾನ ಕೋರಿ e-anudan ಪೋರ್ಟಲ್ ನಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ.

7. **ನ್ಯಾಷನಲ್ ಆಕ್ಷನ್ ಪ್ಲಾನ್ ಫಾರ್ ಡ್ರಗ್ ಡಿಮ್ಯಾಂಡ್ ರಿಡಕ್ಷನ್(National Action Plan for Drug Demand Reduction-NAPDDR):**

ಈ ಯೋಜನೆಯನ್ನು ರಾಜ್ಯದಲ್ಲಿ ೨೦೧೮-೧೯ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಮಾದಕ ವಸ್ತು ವ್ಯಸನಿಗಳ ತಡೆಗಟ್ಟುವ ಶಿಕ್ಷಣ, ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಜಾಗೃತಿ, ಸಾಮರ್ಥ್ಯವರ್ಧನೆ, ನಿರ್ದಿಷ್ಟ ಗುಂಪುಗಳಲ್ಲಿ ಮಾದಕ ವಸ್ತು ತಡೆಗಟ್ಟುವ ಮಧ್ಯಸ್ಥಿಕೆ(Preventive education and Awareness generation, Capacity Buidling, Specific Intervention) ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲಾಗುತ್ತದೆ.

8. **ನಶಾ ಮುಕ್ತ ಭಾರತ ಅಭಿಯಾನ:**

ಈ ಯೋಜನೆಯನ್ನು ರಾಜ್ಯದಲ್ಲಿ 2020-21ನೇ ಸಾಲಿನಿಂದ ಅನುಷ್ಠಾನಗೊಳಿಸಲಾಗುತ್ತಿದೆ.

1. ಮಾದಕ ವಸ್ತು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ವ್ಯಾಪಕ ಪ್ರಚಾರ ನೀಡುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಮೊದಲ ಹಂತದಲ್ಲಿ ಗುರುತಿಸಲಾದ 06 ಜಿಲ್ಲೆಗಳಿಗೆ ತಲಾ 10.00 ಲಕ್ಷಗಳಂತೆ ಒಟ್ಟು ರೂ.60.00 ಲಕ್ಷಗಳನ್ನು ಕೇಂದ್ರ ಸರ್ಕಾರದಿಂದ ನೇರವಾಗಿ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ

ಮಾಡಲಾಗಿರುತ್ತದೆ. (ಬೆಂಗಳೂರು ನಗರ, ರಾಮನಗರ, ಮೈಸೂರು, ಕೊಡಗು, ಉಡುಪಿ ಹಾಗೂ ಕೋಲಾರ)

2. 2ನೇ ಹಂತದಲ್ಲಿ 04 ಜಿಲ್ಲೆಗಳನ್ನು (ಬೆಳಗಾವಿ, ರಾಯಚೂರು, ವಿಜಯಪುರ ಹಾಗೂ ತುಮಕೂರು) ಮತ್ತು ೩ನೇ ಹಂತದಲ್ಲಿ ಬಾಕಿ ಉಳಿದ 21 ಜಿಲ್ಲೆಗಳನ್ನು ಗುರುತಿಸಲಾಗಿರುತ್ತದೆ.

3. ಮೊದಲ ಹಂತದ 06 ಜಿಲ್ಲೆಗಳಲ್ಲಿ ಕೇಂದ್ರ ಸರ್ಕಾರದಿಂದ ನೇರವಾಗಿ ಜಿಲ್ಲಾಧಿಕಾರಿಗಳ ಮುಖಾಂತರ ಅನುಷ್ಠಾನಗೊಳಿಸಲಾಗುತ್ತಿದೆ. 02ನೇ ಮತ್ತು 03ನೇ ಹಂತದಲ್ಲಿ ಗುರುತಿಸಲಾದ ಜಿಲ್ಲೆಗಳಿಗೆ ಕೇಂದ್ರ ಸರ್ಕಾರದಿಂದ ಆಯವ್ಯಯ ಬಿಡುಗಡೆ ಮಾಡಿರುವುದಿಲ್ಲ.

4. 2024-25ನೇ ಸಾಲಿನಲ್ಲಿ ನ್ಯಾಷನಲ್ ಆಕ್ಷನ್ ಪ್ಲಾನ್ ಫಾರ್ ಡ್ರಗ್ ಡಿಮ್ಯಾಂಡ್ ರಿಡಕ್ಷನ್ ಯೋಜನೆಯಡಿ ರೂಪಿಸಲಾಗಿರುವ ರಾಜ್ಯ ಕ್ರಿಯಾ ಯೋಜನೆಯಲ್ಲಿ ನಶಾ ಮುಕ್ತ ಭಾರತ್ ಅಭಿಯಾನ ಯೋಜನೆಯನ್ನು ಅನುಷ್ಠಾನಗೊಳಿಸಲು ಬಾಕಿ ಉಳಿದ ೨೫ ಜಿಲ್ಲೆಗಳಿಗೆ ತಲಾ ರೂ.10.00 ಲಕ್ಷಗಳಂತೆ ರೂ.250.00 ಲಕ್ಷಗಳ ಅನುದಾನವನ್ನು ನೀಡುವಂತೆ ಕೋರಲಾಗಿದೆ.

## 9. ವಿಕಲಚೇತನರಲ್ಲಿಯ ಅಂಗವಿಕಲತೆಯನ್ನು ನಿರ್ಧರಿಸಲು ವೈದ್ಯಕೀಯ ಪ್ರಾಧಿಕಾರ ಹಾಗೂ ವಿಕಲಚೇತನರಿಗೆ ವಿಶಿಷ್ಟ ಗುರುತಿನ ಚೀಟಿ (ಯು.ಡಿ.ಐ.ಡಿ) ವಿತರಣೆ

ವಿಕಲಚೇತನರಿಗೆ ವಿಶಿಷ್ಠ ಗುರುತಿನ ಚೀಟಿ (UNIQUE DISABILITY ID) ನೀಡುವ ಯೋಜನೆಯು ಕೇಂದ್ರ ಸರ್ಕಾರ ಪ್ರಾಯೋಜಿತ ಯೋಜನೆಯಾಗಿದೆ. ಈ ಯೋಜನೆಯನ್ನು ರಾಜ್ಯ ಸರ್ಕಾರವು 2019ರಲ್ಲಿ ಅನುಷ್ಠಾನಗೊಳಿಸಿರುತ್ತದೆ. ಈ ಯೋಜನೆಯಡಿಯಲ್ಲಿ ನೀಡಲಾಗುವ ಗುರುತಿನ ಚೀಟಿಯನ್ನು ವಿವಿಧ ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಉಪಯೋಗಿಸಿಕೊಳ್ಳಬಹುದಾಗಿದೆ. ರಾಜ್ಯ ಸರ್ಕಾರದಿಂದ ನೇಮಿಸಲಾಗುವ ವೈದ್ಯಕೀಯ ಪ್ರಾಧಿಕಾರಗಳಿಂದ ದೃಢೀಕರಿಸಲಾಗುವ ವೈದ್ಯಕೀಯ ಪ್ರಮಾಣ ಪತ್ರದ ಸಮಗ್ರ ಮಾಹಿತಿಯುಳ್ಳ ಗಣಕೀಕೃತ ಗುರುತಿನ ಚೀಟಿಯನ್ನು ವಿಕಲಚೇತನ ವ್ಯಕ್ತಿಗಳಿಗೆ ನೀಡುವ ವ್ಯವಸ್ಥೆಯಾಗಿದ್ದು, ಇದರಲ್ಲಿ ವಿಕಲಚೇತನ ವ್ಯಕ್ತಿಯ ವಿವರಗಳು ಹಾಗೂ ಅವರಲ್ಲಿರುವ ವಿಕಲತೆಯ ವಿವರ ಮತ್ತು ಪ್ರಮಾಣವನ್ನು ನಮೂದಿಸಲಾಗಿರುತ್ತದೆ.

ನಿರ್ದೇಶಕರು,
ವಿಕಲಚೇತನರ ಹಾಗೂ ಹಿರಿಯ
ನಾಗರಿಕರಣ ಸಬಲೀಕರಣ ಇಲಾಖೆ,
ಬೆಂಗಳೂರು.